**<u>ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿ.ಸಿ. ನಂ.5/2021**

| | | | |
|---|---|---|---|
| **ಹೆಸರು** | **:** | **ರಾಕೇಶ** | **ದೋ.ಸಾ. 4** |
| **ತಂದೆಯ ಹೆಸರು** | **:** | **ಸೈಬಣ್ಣ** | **ಪ್ರಾ.ಸಾ. 3** |
| **ವಯಸ್ಸು** | **:** | **28 ವರ್ಷ** | **ದಿನಾಂಕಃ 18-01-2023** |
| **ಉದ್ಯೋಗ** | **:** | **ಕೂಲಿ** | |
| **ವಾಸಸ್ಥಳ** | **:** | **ಚಂದಾಪೂರ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ನನಗೆ ಈ ಪ್ರಕರಣದ ಆರೋಪಿ ಮತ್ತು ಸಾಕ್ಷಿದಾರರಾದ ಚಾಸಾ-5 ರವರು ಗೊತ್ತಿಲ್ಲ.

ಈಗ ನನಗೆ ತೋರಿಸಲಾದ ದಾಖಲೆಯಲ್ಲಿರುವ ಸಹಿ ನನ್ನದೇ. ಸಾಕ್ಷಿ ನೋಡಿ ಗುರುತಿಸಿದ ದಾಖಲೆಯನ್ನು ಈಗ ನಿಪಿ-2 ಎಂದೂ, ಸಾಕ್ಷಿಯ ಸಹಿಯನ್ನು ನಿಪಿ-2 (ಎ) ಎಂದು ಗುರುತಿಸಲಾಯಿತು.

ಈಗ್ಗೆ ಒಂದುವರೆ ವರ್ಷಗಳ ಹಿಂದೆ ನಾನು ಚಂದಾಪೂರ ಗಾಂಧಿ ಚೌಕ ಬಳಿ ಇದ್ದಾಗ ಅಲ್ಲಿಗೆ ಬಂದಿದ್ದ ಪೋಲೀಸರು ನಿಪಿ-2 ರ ದಾಖಲೆಯ ಮೇಲೆ ನನ್ನ ಸಹಿ ಪಡೆದರು.

ನಿಪಿ-2 ರ ದಾಖಲೆಯಲ್ಲಿ ಏನು ಬರೆದಿದೆ ಎನ್ನುವುದು ನನಗೆ ಗೊತ್ತಿಲ್ಲ. ಪೋಲೀಸರು ಅದನ್ನು ನನಗೆ ಓದಿ ಹೇಳಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ ಮತ್ತು ಯಾವುದೆ ವಸ್ತುವನ್ನು ಜಪ್ತು ಮಾಡಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರು ಜರುಗಿಸಿದ ಜಪ್ತಿ ಪಂಚನಾಮೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ದಿನಾಂಕ 12-12-2020 ರಂದು ಚಂದಾಪೂರದಲ್ಲಿರುವ ಆರೋಪಿ ಶಶಿಕಾಂತನ ಮನೆಯ ಬಳಿ

ನನ್ನನ್ನು ಮತ್ತು ಚಾಸಾ-5 ರವರನ್ನು ಕರೆಸಿದ್ದ ಚಿಂಚೋಳಿ ಪೊಲೀಸರು ಅವರ ವಶದಲ್ಲಿದ್ದ ಆರೋಪಿ ತೋರಿಸಿದಂತೆ ದರೋಡೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ನನ್ನ ಮತ್ತು ಚಾಸಾ-5 ರವರ ಸಮಕ್ಷಮ ನಿಪಿ-2 ರ ಮಹಜರ್ ನ್ನು ಮಧ್ಯಾಹ್ನ 12ಃ30 ರಿಂದ 01ಃ30 ಗಂಟೆಯವರೆಗೆ ಬರೆದು ಅಂದಾಜು 2 ಅಡಿ ಉದ್ದದ ಬಿದಿರಿನ ಬಡಿಗೆ, ಒಂದು ಪ್ಲಾಸ್ಟಿಕ್ ಹಿಡಿಕೆ ಉಳ್ಳ ಚಾಕು ಹಾಗೂ ರೂ.1000/- ನಗದು ಹಣವನ್ನು ಜಪ್ತು ಮಾಡಿದ್ದರು ಎನ್ನುವುದು ಸರಿಯಲ್ಲ.

ನಿಪಿ-2 ರ ದಾಖಲೆಯನ್ನು ಪೋಲೀಸರು ನನಗೆ ಓದಿ ಹೇಳಿದ್ದರು ಎನ್ನುವುದು ಸರಿಯಲ್ಲ.

ನನ್ನ ಸಮಕ್ಷಮವೇ ನಿಪಿ-2 ರ ಪಂಚನಾಮೆಯನ್ನು ಪೋಲೀಸರು ಜರುಗಿಸಿ ಮೇಲೆ ಹೇಳಿದ ವಸ್ತುಗಳನ್ನು ಜಪ್ತು ಮಾಡಿದ್ದರುಸ ಸಹ ಆರೋಪಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀ ಎಂ.ಡಿ.ಎ. ವಕೀಲರಿಂದಃ ಇಲ್ಲಾ.</u>**

**ಮರುವಿಚಾರಣೆಃ ಇಲ್ಲಾ**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**